# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ–೪ಎ<br>Part – IVA | ಬೆಂಗಳೂರು, ಮಂಗಳವಾರ, ೦೯, ಡಿಸೆಂಬರ್,೨೦೨೫ ( ಮಾರ್ಗಶಿರಾ,೧೮, ಶಕವರ್ಷ, ೧೯೪೭)<br>BENGALURU, TUESDAY, 09, DECEMBER, 2025 (MARGASHIRA, 18, SHAKAVARSHA, 1947) | ನಂ. ೭೯೨<br>No . 792 |
|---|---|---|

## ಕರ್ನಾಟಕ ಸರ್ಕಾರ

ಸಂಖ್ಯೆ: ಇಪಿ 370 ಪಿಬಿಎಸ್ 2024 (ಭಾ-2)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಡಾ|| ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ: 09.12.2025.

## ಅಧಿಸೂಚನೆ

ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2025ನ್ನು ಕರ್ನಾಟಕ ನಾಗರಿಕ ಸೇವೆಗಳು ಅಧಿನಿಯಮ 1978 (1990ರ ಕರ್ನಾಟಕ ಅಧಿನಿಯಮ 14)ರ ಕಲಂ-3 ರ ಉಪ ಕಲಂ (2) ರ ಖಂಡ (ಎ) ರಲ್ಲಿ ಅಗತ್ಯಪಡಿಸಿರುವಂತೆ ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯ ಭಾಗ-IVA (ಸಂಖ್ಯೆ: 659) ರಲ್ಲಿ ಪ್ರಕಟಿಸಿ ಅದರಿಂದ ಬಾಧಿತರಾಗಲು ಸಂಭವವಿರುವ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಿ ಪ್ರಕಟಿಸಲಾಗಿರುವುದರಿಂದ;

ಸದರಿ ವಿಶೇಷ ರಾಜ್ಯಪತ್ರವನ್ನು ದಿನಾಂಕ: 17.10.2025 ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು ಸದರಿ ಕರಡು ತಿದ್ದುಪಡಿ ನಿಯಮಗಳ ಬಗ್ಗೆ ಸಾರ್ವಜನಿಕರಿಂದ ಸ್ವೀಕೃತವಾಗಿರುವ ಆಕ್ಷೇಪಣೆ ಮತ್ತು ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಗಣಿಸಿರುವುದರಿಂದ;

ಈಗ ಕರ್ನಾಟಕ ನಾಗರಿಕ ಸೇವೆಗಳು ಅಧಿನಿಯಮ 1978 (1990ರ ಕರ್ನಾಟಕ ಅಧಿನಿಯಮ 14) ರ 8ನೇ ಪ್ರಕರಣದೊಂದಿಗೆ ಓದಿಕೊಂಡು 3ನೇ ಪ್ರಕರಣದ (1)ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಈ ಕೆಳಕಂಡಂತೆ ನಿಯಮಗಳನ್ನು ರಚಿಸುತ್ತದೆ ಎಂದರೆ:-

## <u>ನಿಯಮಗಳು</u>

1. **ಶೀರ್ಷಿಕೆ ಮತ್ತು ಪ್ರಾರಂಭ:** (1) ಈ ನಿಯಮಗಳನ್ನು ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2025 ಎಂದು ಕರೆಯತಕ್ಕದ್ದು.

   (2) ಈ ನಿಯಮಗಳು ಕರ್ನಾಟಕ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟಗೊಂಡ ದಿನಾಂಕದಿಂದ ಜಾರಿಯಾಗತಕ್ಕದ್ದು.

2. **ಕೋಷ್ಟಕದ ತಿದ್ದುಪಡಿ:** ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ) (ನೇಮಕಾತಿ) ನಿಯಮಗಳು, 1967ರ ಕೋಷ್ಟಕದಲ್ಲಿ "ಶ್ರೇಣಿ III ಪತ್ರಾಂಕಿತವಲ್ಲದ ಹುದ್ದೆಗಳು" ಶೀರ್ಷಿಕೆಯಡಿಯಲ್ಲಿ ಕ್ರಮ ಸಂಖ್ಯೆ: 66 ರಲ್ಲಿನ ಪ್ರಾಥಮಿಕ ಶಾಲಾ ಶಿಕ್ಷಕರು ತರಗತಿ 1 ರಿಂದ 5 ವರ್ಗದ ಅಂಕಣ ಸಂಖ್ಯೆ (3) ರಲ್ಲಿ:-

   1. ಪ್ರಸ್ತುತ ಇರುವ ಟಿಪ್ಪಣಿಯನ್ನು ಟಿಪ್ಪಣಿ-1 ಎಂದು ಸಂಖ್ಯೀಕರಿಸುವುದು: ಮತ್ತು

   2. ಅದರಂತೆ ಸಂಖ್ಯೀಕರಿಸಿದ ಟಿಪ್ಪಣಿ-1 ರ ನಂತರ ಈ ಕೆಳಗಿನಂತೆ ಸೇರ್ಪಡೆಗೊಳಿಸತಕ್ಕದ್ದು. ಅಂದರೆ,

"ಟಿಪ್ಪಣಿ-2 - 1 ರಿಂದ 5ನೇ ತರಗತಿಗೆ ಬೋಧಿಸುವ ಪ್ರಾಥಮಿಕ ಶಾಲಾ ಶಿಕ್ಷಕರು NCTE ಮಾರ್ಗಸೂಚಿಗಳಲ್ಲಿ ನಿರ್ದಿಷ್ಟಪಡಿಸಿದಂತೆ ಮತ್ತು ಪದವೀಧರ ಪ್ರಾಥಮಿಕ ಶಿಕ್ಷಕರ ಹುದ್ದೆಗೆ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿರುವಂತೆ ಅಗತ್ಯ ವಿಷಯಗಳಲ್ಲಿ ಪದವಿಯನ್ನು ಹೊಂದಿದ್ದಲ್ಲಿ, 6 ಮತ್ತು 7 ನೇ ತರಗತಿಗೆ ಬೋಧಿಸಲು ಅರ್ಹರಾಗತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಮಲ್ಲಿಕಾರ್ಜುನ ರಾಮಚಂದ್ರಪ್ಪ),**
ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ),
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

# GOVERNMENT OF KARNATAKA

No.EP 370 PBS 2024 (P –2)

Karnataka Government Secretariat
M.S.Building,
Dr. B.R. Ambedkar Veedhi,
Bangalore Date: 09.12.2025.

## NOTIFICATION

Whereas the draft of the Karnataka Education Department Services (Department of Public Instructions) (Recruitment) (Amendment) Rules, 2025 was published in Part-IVA (No.659) of the special edition of the Karnataka Gazette as required by clause (a) of sub-section (2) of section 3 of the Karnataka State Civil Services Act, 1978 (Karnataka Act 14 of 1990) inviting objections and suggestions from all persons likely to be affected thereby within fifteen days from the date of its publication in the official Gazette.

And whereas the said Gazette was made available to the public on 17.10.2025.

And whereas the objections and suggestions received from the public have been considered the Government.

Now, therefore, in exercise of the powers conferred by sub-section (1) of section 3 read with section 8 of the Karnataka State Civil Services Act, 1978 (Karnataka Act 14 of 1990), the Government of Karnataka here by makes the following Rules, namely,

## RULES

1. **Title and commencement:-** (1) These rules may be called the Karnataka Education Department Services (Department of Public Instructions) (Recruitment) (Amendment) Rules, 2025.

(2) They shall come into force from date of their final publication in the Official Gazette.

2. **Amendment of Schedule:** In the Karnataka Education Department Services (Department of Public Instructions) (Recruitment) Rules, 1967, in the schedule, under the heading "Class III, NON-GAZETTED posţs in the category of post of Primary School Teacher for class 1 to 5 at serial no. 66, in column no. (3),-

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



(1) The existing note shall be numbered as Note-1; and

(2) After Note -1, as so numbered the following shall be inserted namely:-

"Note-2 Primary School Teachers teaching for Class 1 to 5 who are possessing Graduation in the necessary subjects specified in NCTE Guidelines and in the existing Cadre & Recruitment Rules for the post of Graduate Primary Teachers shall be eligible to teach for classes 6 and 7".

By Order and in the name of the
Governor of Karnataka

**(Mallikarjuna Ramachandrappa)**
Under Secretary to Government (Admin)
Department of School Education & Literacy

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAI
AH